**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು**

**ಸಂಖ್ಯೆ/ಕರಾಸಾ/ಕೇಕ/ವಶಾ/ಸಾಮಾನ್ಯ/ 307 /2020-2021** **ದಿನಾಂಕ : 2/3/21**

**ಸುತ್ತೋಲೆ**

ವಿಷಯ : ಜ್ಯೇಷ್ಠತಾ ಪಟ್ಟಿಗಳನ್ನು ನಿಗಮದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸುವ ಕುರಿತು.

* * * * * *

ಅಧಿಕಾರಿ/ಸಿಬ್ಬಂದಿ ಹುದ್ದೆಗಳ ದಿನಾಂಕ: 01/01/2020 ರಂದು ಇರುವಂತೆ ಜ್ಯೇಷ್ಠತಾ ಪಟ್ಟಿಗಳನ್ನು ನಿಗಮದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲಾಗಿತ್ತು. ಪ್ರಸ್ತುತ ದಿನಾಂಕ:01/01/2020 ರಿಂದ 31/12/2020 ರವರೆಗಿನ ಅವಧಿಯನ್ನು ಒಳಗೊಂಡಂತೆ **ದಿನಾಂಕ:01/01/2021 ರಂದು ಇರುವಂತೆ** ಅಧಿಕಾರಿ/ಸಿಬ್ಬಂದಿ ಹುದ್ದೆಗಳ ಜ್ಯೇಷ್ಠತಾ ಪಟ್ಟಿಗಳನ್ನು ಸಿದ್ಧಪಡಿಸುವ ಕಾರ್ಯ ಪ್ರಗತಿಯಲ್ಲಿದ್ದು, ಅವುಗಳನ್ನು ಸಿದ್ಧಪಡಿಸಿ ಹಂತ-ಹಂತವಾಗಿ ನಿಗಮದ ಅಧಿಕೃತ ಜಾಲತಾಣ **ksrtc.karnataka.gov.in / www.ksrtc.in** ನಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ, 4 ಸಾರಿಗೆ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು/ ಮೇಲ್ವಿಚಾರಕ/ರಾಜ್ಯಮಟ್ಟದ ಮೇಲ್ವಿಚಾರಕೇತರ ಹುದ್ದೆಗಳ ಸಿಬ್ಬಂದಿಗಳು ನಿಗಮದ ಜಾಲತಾಣದಲ್ಲಿ ಪ್ರಕಟಿಸುವ ಜ್ಯೇಷ್ಠತಾ ಪಟ್ಟಿಗಳನ್ನು ಸಕಾಲದಲ್ಲಿ ಗಮನಿಸುವಂತೆ ಹಾಗೂ ಪ್ರಾವಿಷನಲ್ ಜ್ಯೇಷ್ಠತಾ ಪಟ್ಟಿಯಲ್ಲಿ ನಮೂದಿಸಿರುವ ಸೇವಾ ವಿವರ, ಜ್ಯೇಷ್ಠತಾ ಸ್ಥಾನ ಸ್ಥಿತಿ ಮತ್ತು ಜ್ಯೇಷ್ಠತೆಗೆ ಸಂಬಂಧಿಸಿದ ಇತರೆ ಅಂಶಗಳ ಬಗ್ಗೆ ಆಕ್ಷೇಪಣೆಗಳಿದ್ದಲ್ಲಿ, ಆಕ್ಷೇಪಣೆಗಳನ್ನು ಸಮರ್ಥಿಸುವಂಥಹ ದೃಢೀಕೃತ ದಾಖಲೆಗಳೊಂದಿಗೆ ಪ್ರಾವಿಷನಲ್ ಜ್ಯೇಷ್ಠತಾ ಪಟ್ಟಿ ಪ್ರಕಟಗೊಂಡ ದಿನಾಂಕದಿಂದ 30 ದಿನಗಳೊಳಗಾಗಿ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು(ಸಿಬ್ಬಂದಿ), ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ವರಿಷ್ಠತಾ ಶಾಖೆ, ಬೆಂಗಳೂರು ರವರಿಗೆ ತಲುಪುವಂತೆ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ ಹಾಗೂ ನಿಗದಿತ ಅವಧಿಯ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಆಕ್ಷೇಪಣೆಗಳನ್ನು ಪರಿಶೀಲಿಸಿ ಅಂತಿಮಗೊಳಿಸಿದ ಜ್ಯೇಷ್ಠತಾ ಪಟ್ಟಿಗಳನ್ನು ಸಹ ನಿಗಮದ ಜಾಲತಾಣದಲ್ಲಿ ಪ್ರಕಟಿಸಲಾಗುವುದು.

ಮುಂದುವರೆದು, ಜ್ಯೇಷ್ಠತಾ ಪಟ್ಟಿಗಳನ್ನು ನಿಗಮದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸುತ್ತಿರುವುದರಿಂದ, ವೈಯಕ್ತಿಕವಾಗಿ ಉದ್ಯೋಗಿಗಳಿಗೆ ಜಾರಿಗೊಳಿಸಲಾಗುವುದಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ.

ಸದರಿ ಸುತ್ತೋಲೆಯನ್ನು ಎಲ್ಲಾ ಅಧಿಕಾರಿಗಳು/ಸಿಬ್ಬಂದಿಗಳ ಗಮನಕ್ಕೆ ತರುವಂತೆ ಈ ಮೂಲಕ ಸೂಚಿಸಲಾಗಿದೆ.

**ನಿರ್ದೇಶಕರು (ಸಿಬ್ಬಂದಿ : ಪರಿಸರ)**

**ಪ್ರತಿಯನ್ನು ವಂದನಾಪೂರ್ವಕವಾಗಿ :**

1. ಅಧ್ಯಕ್ಷರು/ಉಪಾಧ್ಯಕ್ಷರು, ಕ.ರಾ.ರ.ಸಾ.ನಿಗಮ, ರವರ ಆಪ್ತ ಕಾರ್ಯದರ್ಶಿರವರಿಗೆ
2. ವ್ಯವಸ್ಥಾಪಕ ನಿರ್ದೇಶಕರು,ಕ.ರಾ.ರ.ಸಾ.ನಿಗಮ/ಬೆಂ.ಮ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಈ.ಕ.ರ.ಸಾ.ಸಂಸ್ಥೆ ರವರಿಗೆ
3. ನಿರ್ದೇಶಕರು (ಸಿ:ಪ)/ ನಿರ್ದೇಶಕರು (ಭ:ಜಾ), ಕ.ರಾ.ರ.ಸಾ.ನಿಗಮ ರವರಿಗೆ

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

1. ಎಲ್ಲಾ ಇಲಾಖಾ ಮುಖ್ಯಸ್ಥರುಗಳು / ವಿಭಾಗೀಯ ಮುಖ್ಯಸ್ಥರುಗಳು, ಕ.ರಾ.ರ.ಸಾ.ನಿಗಮ ರವರುಗಳಿಗೆ
2. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ / ವಾ.ಕ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ ರವರಿಗೆ
3. ಮುಖ್ಯ ಭದ್ರತಾ ಮತ್ತು ಜಾಗೃತಾಧಿಕಾರಿ. ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸುವುದು.
4. ಮುಖ್ಯ ಗಣಕ ವ್ಯವಸ್ಥಾಪಕರು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರಿಗೆ ಸುತ್ತೋಲೆಯನ್ನು ಹಾಗು ಜ್ಯೇಷ್ಠತಾ ಪಟ್ಟಿಗಳನ್ನು ನಿಗಮದ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸುವುದು.
5. ಕಛೇರಿ ಪತ್ರ ಕಡತ.